# ಮಂಗಳೂರು ವಿಶ್ವವಿದ್ಯಾನಿಲಯ

ದಿನಾಂಕ 08.11.2022ರಂದು ಪೂರ್ವಾಹ್ನ ಗಂಟೆ 10.00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2022ನೇ ಸಾಲಿನ ಏಳನೆಯ ಸಾಮಾನ್ಯ ಸಭೆಯ ನಡವಳಿಗಳು.

**ಉಪಸ್ಥಿತರು:**

| ಕ್ರ.ಸಂ. | | | ಸಹಿ |
|---|---|---|---|
| 1. | ಪ್ರೊ. ಪಿ. ಸುಬ್ರಹ್ಮಣ್ಯ ಯಡಪಡಿತ್ತಾಯ | ಅಧ್ಯಕ್ಷರು | |
| 2. | ಡಾ. ಜೆನಿಫರ್ ಲೋಲಿಟಾ ಸಿ.,<br>ಜಂಟಿ ನಿರ್ದೇಶಕರು<br>(ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಶ್ರೀ ರವಿಚಂದ್ರ ಪಿ. ಎಂ. | ಸದಸ್ಯರು | |
| 4. | ಪ್ರೊ. ಮಂಜುನಾಥ ಪಟ್ಟಾಭಿ<br>ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ | ಸದಸ್ಯರು | |
| 5. | ಶ್ರೀ ಲೆವಿನ್ ಡಿ'ಸೋಜ | ಸದಸ್ಯರು | |
| 6. | ಡಾ. ಶಂಕರ ಭಟ್ ಪಿ. | ಸದಸ್ಯರು | |
| 7. | ಶ್ರೀಮತಿ ಸುಭಾಶಿಣಿ ಶ್ರೀವತ್ಸ | ಸದಸ್ಯರು | |
| 8. | ಶ್ರೀ ಕೆ. ರಮೇಶ | ಸದಸ್ಯರು | |
| 9. | ಶ್ರೀ ವಿವೇಕಾನಂದ ಪನಿಯಾಳ | ಸದಸ್ಯರು | |
| 10. | ಶ್ರೀ ರವೀಂದ್ರನಾಥ ರೈ | ಸದಸ್ಯರು | |
| 11. | ಡಾ. ಎಂ. ಎಸ್. ತಳವಾರ | ಸದಸ್ಯರು | |
| 12. | ಶ್ರೀಮೋಹನ್ ಪಡಿವಾಳ್ | ಸದಸ್ಯರು | |
| 13. | ಡಾ. ಎ. ಪಾರ್ವತಿ ಅಪ್ಪಯ್ಯ | ಸದಸ್ಯರು | |
| 14. | ಪ್ರೊ. ವಿಶ್ವನಾಥ್<br>ಪ್ರಾಧ್ಯಾಪಕರು,<br>ಸ್ನಾತಕೋತ್ತರ ಅರ್ಥಶಾಸ್ತ್ರ ವಿಭಾಗ | ಸದಸ್ಯರು | |
| 15. | ಡಾ. ಸಿಪ್ರಿಯನ್ ಮೊಂತೇರೋ<br>ಪ್ರಾಂಶುಪಾಲರು, ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ,<br>ಸಾರ್ವಜನಿಕ ಶಿಕ್ಷಣ ಆಯುಕ್ತರ ಪರವಾಗಿ | ಸದಸ್ಯರು | |
| 16. | ಪ್ರೊ. ವೈ ಸಂಗಪ್ಪ<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ<br>ಆಹ್ವಾನಿತರು | |
| 17. | ಪ್ರೊ. ಕಿಶೋರ್ ಕುಮಾರ್ ಸಿ. ಕೆ.<br>ಕುಲಸಚಿವರು (ಆಡಳಿತ) | ಸದಸ್ಯ<br>ಕಾರ್ಯದರ್ಶಿ | |

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

➢ **ಸ್ವಾಗತ:**

I. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 28(1)(ಡಿ) ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಡೀನರ ನೆಲೆಯಲ್ಲಿ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ ಪ್ರೊ. ಮಂಜುನಾಥ ಪಟ್ಟಾಭಿ, ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ ಹಾಗೂ ಪ್ರಾಧ್ಯಾಪಕರು, ಸ್ನಾತಕೋತ್ತರ ವಸ್ತುವಿಜ್ಞಾನ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರನ್ನು ಕುಲಸಚಿವರು ಸಭೆಗೆ ಸ್ವಾಗತಿಸಿದರು.

II. ಕುಲಸಚಿವರ ಕಛೇರಿ ಅಧಿಕೃತ ಜ್ಞಾಪನ ಸಂಖ್ಯೆ: ಮಂವಿ/ಕುಸ/ಸಿಬ್ಬಂದಿ(ಇ3)/15/2022 ದಿನಾಂಕ 15.10.2022ರನ್ವಯ ದಿನಾಂಕ 15.10.2022ರಂದು ಮಂಗಳೂರು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿ ಹುದ್ದೆಯ ಪ್ರಭಾರವನ್ನು ವಹಿಸಿರುವ ಪ್ರೊ. ಸಂಗಪ್ಪ, ಪ್ರಾಧ್ಯಾಪಕರು, ಸ್ನಾತಕೋತ್ತರ ಭೌತಶಾಸ್ತ್ರ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರು ವಿಶೇಷ ಆಹ್ವಾನಿತರ ನೆಲೆಯಲ್ಲಿ ಸಿಂಡಿಕೇಟು ಸಭೆಗೆ ಆಗಮಿಸಿದ್ದು, ಇವರನ್ನು ಕುಲಸಚಿವರು ಸಭೆಗೆ ಸ್ವಾಗತಿಸಿದರು.

➢ **ಕೃತಜ್ಞತೆ:**

I. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 28(1)(ಡಿ) ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಡೀನರ ನೆಲೆಯಲ್ಲಿ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ, ಡಾ. ಜೆರಾಲ್ಡ್ ಸಂತೋಷ್ ಡಿ'ಸೋಜ, ಡೀನರು, ಶಿಕ್ಷಣ ನಿಕಾಯ, ಹಾಗೂ ನಿರ್ದೇಶಕರು, ಸ್ನಾತಕೋತ್ತರ ದೈಹಿಕ ಶಿಕ್ಷಣ ಮತ್ತು ಕ್ರೀಡಾ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರ ಸದಸ್ಯತ್ವದ ಅವಧಿಯು ದಿನಾಂಕ 06.11.2022ರಂದು ಕೊನೆಗೊಂಡಿರುವುದರಿಂದ ಸದರಿಯವರನ್ನು ಸಿಂಡಿಕೇಟು ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

II. ಮಂಗಳೂರು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿ ಹುದ್ದೆಯ ಪ್ರಭಾರವನ್ನು ವಹಿಸಿ ವಿಶೇಷ ಆಹ್ವಾನಿತರ ನೆಲೆಯಲ್ಲಿ ಸಿಂಡಿಕೇಟು ಸಭೆಗಳಿಗೆ ಹಾಜರಾಗುತ್ತಿದ್ದ ಪ್ರೊ. ಕೆ. ಎಸ್. ಜಯಪ್ಪ, ಪ್ರಾಧ್ಯಾಪಕರು, ಸ್ನಾತಕೋತ್ತರ ಸಾಗರ ಭೂವಿಜ್ಞಾನ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಇವರು ದಿನಾಂಕ 15.10.2022ರ ಅಪರಾಹ್ನದಿಂದ ಹಣಕಾಸು ಅಧಿಕಾರಿ ಹುದ್ದೆಯ ಪ್ರಭಾರದಿಂದ ಬಿಡುಗಡೆಗೊಂಡಿರುವ ವಿಷಯವನ್ನು ಕುಲಸಚಿವರು ಸಭೆಗೆ ತಿಳಿಸಿದರು.

ಇವರುಗಳು ತಮ್ಮ ಸಿಂಡಿಕೇಟು ಸದಸ್ಯತ್ವದ ಅವಧಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕಾಗಿ ಇವರಿಗೆ ಸಿಂಡಿಕೇಟ್ ಹಾಗೂ ಮಂಗಳೂರು ವಿಶ್ವವಿದ್ಯಾನಿಲಯದ ಪರವಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

## I. ನಡವಳಿಗಳ ದೃಢೀಕರಣ

1. ದಿನಾಂಕ 15.09.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ಆರನೇ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.

   **- ದೃಢೀಕರಿಸಲಾಯಿತು. –**

## II. ಅನುಸರಣಾ ವರದಿಯ ಅನುಮೋದನೆ

1. ದಿನಾಂಕ 23.07.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ಐದನೇ ಸಾಮಾನ್ಯ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.

ಕ್ರಮ ಸಂಖ್ಯೆ 5 ಕ್ಕೆ ಸಂಬಂಧಿಸಿ, ಪ್ರೊ. ಉದಯಕುಮಾರ್, ನಿಕಟಪೂರ್ವ ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇವರಿಗೆ ತಿಳುವಳಿಕೆ ಪತ್ರ ನೀಡಿ ಸದರಿ ಪತ್ರದ ಪ್ರತಿಯನ್ನು ಹಾಲಿ ಪ್ರಾಂಶುಪಾಲರಿಗೆ ನೀಡುವುದು. ಉಳಿದಂತೆ ಅನುಸರಣಾ ವರದಿಯನ್ನು ಅನುಮೋದಿಸಲಾಯಿತು.

## III. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.

**ಕಾರ್ಯಸೂಚಿ ಸಂಖ್ಯೆ: ಪ.ಜಾ.ಪ.ಪಂ.ಘಟಕ: ಸಾ.ಸ.7:1(2022)**

ವಿಷಯ: ಶ್ರೀ ಮಲ್ಲೇಶಿ ಕವಸರ, ಸಂಶೋಧನಾ ವಿದ್ಯಾರ್ಥಿ, ಭೌತಶಾಸ್ತ್ರ ವಿಭಾಗ ಇವರು ವಿದೇಶದಲ್ಲಿ ನಡೆಯುವ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಸಂಶೋಧನಾ ಪತ್ರಿಕೆಯನ್ನು ಮಂಡಿಸಲು ಅನುಮತಿ ಹಾಗೂ ತತ್ಸಬಂಧ ತಗಲುವ ಆರ್ಥಿಕ ಸಹಾಯಧನ ನೀಡುವ ಬಗ್ಗೆ.

ನಿರ್ಣಯ: ಶ್ರೀ ಮಲ್ಲೇಶಿ ಕವಸರ, ಸಂಶೋಧನಾ ವಿದ್ಯಾರ್ಥಿ, ಭೌತಶಾಸ್ತ್ರ ವಿಭಾಗ ಇವರಿಗೆ ರೂ.2,44,200.00 (ರೂಪಾಯಿ ಎರಡು ಲಕ್ಷದ ನಲವತ್ತನಾಲ್ಕು ಸಾವಿರದ ಇನ್ನೂರು ಮಾತ್ರ) ಮುಂಗಡ ಮಂಜೂರು ಮಾಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಕಾನೂನು ಘಟಕ : ಸಾ.ಸ.7:2(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಭೌತಶಾಸ್ತ್ರ ವಿಭಾಗದಲ್ಲಿ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸುತ್ತಿದ್ದ ಡಾ. ಧರ್ಮಪ್ರಕಾಶ್ ಇವರು ತಮ್ಮ ವಯೋನಿವೃತ್ತಿ ವಯೋಮಾನವನ್ನು 62 ವರ್ಷದಿಂದ 65 ವರ್ಷಕ್ಕೇರಿಸಬೇಕೆಂದು ಕೋರಿ ಕರ್ನಾಟಕ ರಾಜ್ಯ ಸರಕಾರ ಸೇರಿದಂತೆ ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ಇತರರ ವಿರುದ್ಧ ಕರ್ನಾಟಕ ಮಾನ್ಯ ಉಚ್ಛ ನ್ಯಾಯಾಲಯದಲ್ಲಿ

ಹೂಡಿರುವ ರಿಟ್ ಅರ್ಜಿ ಸಂ. 9011/2022ಗೆ ಸಂಬಂಧಿಸಿದಂತೆ ವಿಶ್ವವಿದ್ಯಾನಿಲಯದ ಪರವಾಗಿ ಹೂಡಿರುವ ಆಕ್ಷೇಪಣಾ ಹೇಳಿಕೆಗಳ ಅನುಮೋದನೆ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು. ಮಧ್ಯಂತರ ಆದೇಶವನ್ನು ತುರ್ತಾಗಿ ತೆರವುಗೊಳಿಸಲು ಮತ್ತು ಇದರ ಸತ್ಯಾಸತ್ಯತೆಯನ್ನು ನ್ಯಾಯಾಲಯದ ಗಮನಕ್ಕೆ ತರಲು ನಿರ್ಣಯಿಸಿ, ಪ್ರಕರಣದ ಬಗ್ಗೆ ಸಮಗ್ರ ಮಾಹಿತಿಯನ್ನು ಸರಕಾರದ ಗಮನಕ್ಕೆ ತರಬೇಕೆಂಬುದಾಗಿಯೂ ನಿರ್ಣಯಿಸಲಾಯಿತು. ಮಾಹಿತಿಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿಯೂ ನಿರ್ಣಯಿಸಲಾಯಿತು.

ಇಂತಹ ಪ್ರಕರಣಗಳು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಮರುಕಳಿಸದಂತೆ ಮುನ್ನೆಚ್ಚರಿಕೆ ವಹಿಸುವ ಸಲುವಾಗಿ, ವಿಶ್ವವಿದ್ಯಾನಿಲಯದ ಸೇವೆಯಿಂದ ಸದ್ಯೋಭವಿಷ್ಯದಲ್ಲಿ ವಯೋನಿವೃತ್ತಿ ಹೊಂದಲಿರುವ ಪ್ರಾಧ್ಯಾಪಕರುಗಳಿಗೆ ವಯೋನಿವೃತ್ತಿ ಹೊಂದುವ ಬಗ್ಗೆ ಹೊರಡಿಸುವ ಅಧಿಸೂಚನೆಯನ್ವಯ CAVEAT ದಾಖಲಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ: ಕಾನೂನು ಘಟಕ : ಸಾ.ಸ.7:3(2022)**

ವಿಷಯ: ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಡಾ. ಅರಬಿ ಯು., ಪ್ರಾಧ್ಯಾಪಕರು, ಅರ್ಥಶಾಸ್ತ್ರ ವಿಭಾಗ ಇವರು ಹೂಡಿರುವ ರಿಟ್ ಅರ್ಜಿ ಸಂಖ್ಯೆ: 15070/2020ಗೆ ಸಂಬಂಧಿಸಿದಂತೆ ನೀಡಿರುವ ತೀರ್ಪನ್ನು ಪ್ರಶ್ನಿಸಿ ಮಂಗಳೂರು ವಿಶ್ವವಿದ್ಯಾನಿಲಯವು ಹೂಡಿರುವ ರಿಟ್ ಅಪೀಲ್ ಸಂಖ್ಯೆ: 1081/2021ಗೆ ಸಂಬಂಧಿಸಿದಂತೆ ವಿಶ್ವವಿದ್ಯಾನಿಲಯದ ಪರ ವಕೀಲರಾದ ಅರುಣ ಶ್ಯಾಂ ಅಸೋಸಿಯೆಟ್ಸ್ ಇವರ ಬಿಲ್ಲಿನ ಮೊತ್ತ ಪಾವತಿ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಕಾನೂನು ಘಟಕ : ಸಾ.ಸ.7:4(2022)**

ವಿಷಯ: ಶ್ರೀ ಗಣೇಶ್ ಎನ್. ಸಾಯಿ ಇವರು ತಮ್ಮ ಬಿ.ಎಸ್ಸಿ. (ಪಿ.ಸಿ.ಎಮ್.) ಪದವಿಯನ್ನು ಮಂಗಳೂರು ವಿಶ್ವವಿದ್ಯಾನಿಲಯದ ಸ್ವಾಯತ್ತ ಕಾಲೇಜು ಆಗಿರುವ ಸಂತ ಅಲೋಷಿಯಸ್ ಕಾಲೇಜು ಮಂಗಳೂರು ವ್ಯಾಸಂಗ ಮಾಡುತ್ತಿದ್ದು ತಮ್ಮ ವರ್ಗಾವಣೆ ಪ್ರವೇಶಾನುಮತಿ ಕೋರಿ ಈ ಬಗ್ಗೆ ಸೂಕ್ತ ನಿರ್ದೇಶನ ನೀಡುವಂತೆ ಸಲ್ಲಿಸಿರುವ ಕರ್ನಾಟಕ ರಾಜ್ಯ ಉಚ್ಛ ನ್ಯಾಯಾಲಯದಲ್ಲಿ ಹೂಡಿದ್ದ ರಿಟ್ ಅರ್ಜಿ ಸಂ. 22575/2021(S-RES) ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಪರೀಕ್ಷಾಂಗ : ಸಾ.ಸ.7:5(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಎಪ್ರಿಲ್/ಮೇ 2022ರ ಪದವಿ ಪರೀಕ್ಷೆಗಳ ಮೌಲ್ಯಮಾಪನ ಕೇಂದ್ರಗಳಲ್ಲಿ M.L. Officer ಗಳ ಸೇವೆಯನ್ನು ಬಳಸಿಕೊಂಡಿರುವುದರಿಂದ ಸದರಿ ಸಿಬ್ಬಂದಿಗಳಿಗೆ ಸಂಭಾವನೆ ನಿಗದಿಪಡಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಪರೀಕ್ಷಾಂಗ : ಸಾ.ಸ.7:6(2022)**

ವಿಷಯ: ಸಮಾಜಕಾರ್ಯ ವಿಭಾಗದ ಬೋಧಕರ ನಡುವಿನ ಭಿನ್ನಾಭಿಪ್ರಾಯಕ್ಕೆ ಸಂಬಂಧಿಸಿ, ಪದೇ ಪದೇ ಪರಸ್ಪರ ದೂರುಗಳು ಬರುತ್ತಿರುವ ಬಗ್ಗೆ.

ನಿರ್ಣಯ: ಸ್ನಾತಕೋತ್ತರ ಸಮಾಜಕಾರ್ಯ ಅಧ್ಯಯನ ವಿಭಾಗಗಕ್ಕೆ ಸಂಬಂಧಪಟ್ಟ ದೂರುಗಳನ್ನು ಮಾನ್ಯ ಕುಲಪತಿಗಳು ಇತ್ಯರ್ಥಗೊಳಿಸಿರುವ ವಿಷಯವನ್ನು ಸಭೆಗೆ ತಿಳಿಸಿದರು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:7(2022)**

ವಿಷಯ: ಶೈಕ್ಷಣಿಕ ವರ್ಷ 2022-23ನೇ ಸಾಲಿಗೆ ಸ್ನಾತಕೋತ್‌ತರ/ಪಿ.ಜಿ. ಡಿಪ್ಲೊಮಾ / ಸರ್ಟಿಫಿಕೇಟು ಕಾರ್ಯಕ್ರಮಗಳ ಪರೀಕ್ಷಾ ಶುಲ್ಕ ಹಾಗೂ ಇತರ ಶುಲ್ಕಗಳನ್ನು ನಿಗದಿಪಡಿಸುವ ಬಗ್ಗೆ.

ನಿರ್ಣಯ: ದಿನಾಂಕ 03.09.2022ರಂದು ನಡೆದ ಶುಲ್ಕ ಪರಿಷ್ಕರಣಾ ಸಮಿತಿಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:8(2022)**

ವಿಷಯ: ವಿಶ್ವವಿದ್ಯಾನಿಲಯ ಸಂಧ್ಯಾ ಕಾಲೇಜು, ಮಂಗಳೂರು ಇಲ್ಲಿ ಸರ್ಟಿಫಿಕೇಟ್ / ಡಿಪ್ಲೋಮಾ ಪ್ರೋಗ್ರಾಂ ಇನ್ ಗೂಡ್ಸ್ ಆಂಡ್ ಸರ್ವಿಸ್ ಟ್ಯಾಕ್ಸ್ (ಜಿ.ಎಸ್.ಟಿ.) ಹಾಗೂ ಸರ್ಟಿಫಿಕೇಟ್ ಇನ್ ಎನ್ವಿರಾನ್ಮೆಂಟಲ್ ಲಾ ಕಾರ್ಯಕ್ರಮಗಳಿಗೆ ವಿದ್ಯಾರ್ಥಿ ಪರಿಮಿತಿ ನಿಗದಿಪಡಿಸುವ ಬಗ್ಗೆ.

ನಿರ್ಣಯ: ಶೈಕ್ಷಣಿಕ ವರ್ಷ 2022-23ನೇ ಸಾಲಿನಿಂದ Diploma in French Language, Diploma in German Language ಕಾರ್ಯಕ್ರಮಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಯಿತು. ಸರ್ಟಿಫಿಕೇಟ್ / ಡಿಪ್ಲೋಮಾ ಪ್ರೋಗ್ರಾಂ ಇನ್ ಗೂಡ್ಸ್ ಆಂಡ್ ಸರ್ವಿಸ್ ಟ್ಯಾಕ್ಸ್ (ಜಿ.ಎಸ್.ಟಿ.) ಹಾಗೂ ಸರ್ಟಿಫಿಕೇಟ್ ಇನ್ ಎನ್ವಿರಾನ್ಮೆಂಟಲ್ ಲಾ ಕಾರ್ಯಕ್ರಮಗಳಿಗೆ ತಲಾ ೯೦ ವಿದ್ಯಾರ್ಥಿ ಪರಿಮಿತಿಯನ್ನು

ನಿಗದಿಪಡಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:9(2022)**

ವಿಷಯ: ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿನ ವಿಶೇಷ ಕೋಟಾದಡಿಯಲ್ಲಿ ಬರುವ ಸೀಟುಗಳನ್ನು UUCMS ತಂತ್ರಾಂಶದಲ್ಲಿ ನಮೂದಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:10(2022)**

ವಿಷಯ: ಏಕಕಾಲದಲ್ಲಿ ಎರಡು ಶೈಕ್ಷಣಿಕ ಕಾರ್ಯಕ್ರಮಗಳನ್ನು ಅಧ್ಯಯನ ಮಾಡಲು ಅವಕಾಶ ಕಲ್ಪಿಸಿಕೊಡುವ ಮಾರ್ಗಸೂಚಿಗಳ ಅನುಮೋದನೆ ಬಗ್ಗೆ.

ನಿರ್ಣಯ: ದಿನಾಂಕ 27.09.2022ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:11(2022)**

ವಿಷಯ: ಬಿ.ಡಿ. ಶೆಟ್ಟಿ ಕಾಲೇಜ್ ಆಫ್ ಬಿಸಿನೆಸ್ ಮ್ಯಾನೇಜ್‌ಮೆಂಟ್, ಮಾಬುಕಳಾ, ಉಡುಪಿ ವಿದ್ಯಾಸಂಸ್ಥೆಯ ಆಡಳಿತ ಮಂಡಳಿ ಬದಲಾವಣೆ ಬಗ್ಗೆ.

ನಿರ್ಣಯ: ದಿನಾಂಕ 27.09.2022ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:12(2022)**

ವಿಷಯ: ಸ್ಕೂಲ್ ಆಫ್ ಸೋಷಿಯಲ್ ವರ್ಕ್, ರೋಶನಿ ನಿಲಯ (ಸ್ವಾಯತ್ತ), ಮಂಗಳೂರು ಇಲ್ಲಿ B.Com. ಸ್ನಾತಕ ಕಾರ್ಯಕ್ರಮವನ್ನು ಪ್ರಾರಂಭಿಸಲು ಮತ್ತು M.Sc. in Criminology and Forensic Science ಸ್ನಾತಕೋತ್ತರ ಕಾರ್ಯಕ್ರಮಕ್ಕೆ 10 ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿ ನೀಡುವ ಬಗ್ಗೆ.

ನಿರ್ಣಯ: ದಿನಾಂಕ 27.09.2022ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:13(2022)**

ವಿಷಯ: ಸಂತ ಆಗ್ನೆಸ್ ಕಾಲೇಜು (ಸ್ವಾಯತ್ತ), ಮಂಗಳೂರು ಇಲ್ಲಿ ಬಿ.ಎ. ಮತ್ತು ಬಿ.ಎಸ್ಸಿ. ಕಾರ್ಯಕ್ರಮಗಳಲ್ಲಿ ಹೊಸ ಕೋರ್ಸ್‌ಗಳನ್ನು ಹಾಗೂ ಸ್ನಾತಕೋತ್ತರ ಕಾರ್ಯಕ್ರಮಕ್ಕೆ ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿ ನೀಡುವ ಬಗ್ಗೆ.

ನಿರ್ಣಯ: ದಿನಾಂಕ 27.09.2022ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು

ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:14(2022)**

ವಿಷಯ: ಸಂತ ಆಗ್ನೆಸ್ ಕಾಲೇಜು (ಸ್ವಾಯತ್ತ), ಮಂಗಳೂರು ಶೈಕ್ಷಣಿಕ ವರ್ಷ 2022-23ನೇ ಸಾಲಿನಿಂದ ಎಂ.ಬಿ.ಎ. ಮತ್ತು ಎಂ.ಸಿ.ಎ. ಕಾರ್ಯಕ್ರಮಗಳನ್ನು ಸ್ವಾಯತ್ತ ಸ್ಥಾನಮಾನದೊಂದಿಗೆ ಪ್ರಾರಂಭಿಸುವ ಕುರಿತು.

ನಿರ್ಣಯ: ದಿನಾಂಕ 27.09.2022ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:15(2022)**

ವಿಷಯ: ಸಂತ ಆಗ್ನೆಸ್ ಕಾಲೇಜು (ಸ್ವಾಯತ್ತ), ಮಂಗಳೂರು ಇಲ್ಲಿ ಶೈಕ್ಷಣಿಕ ವರ್ಷ 2022-23ನೇ ಸಾಲಿನಿಂದ ಬಿ.ಸಿ.ಎ. ಕಾರ್ಯಕ್ರಮಕ್ಕೆ 70 ವಿದ್ಯಾರ್ಥಿ ಪರಿಮಿತಿಯೊಂದಿಗೆ ಹೆಚ್ಚುವರಿ ವಿಭಾಗಕ್ಕೆ (ಸ್ವಾಯತ್ತ ಸ್ಥಾನಮಾನದೊಂದಿಗೆ) ಅನುಮತಿ ನೀಡುವ ಬಗ್ಗೆ.

ನಿರ್ಣಯ: ದಿನಾಂಕ 27.09.2022ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:16(2022)**

ವಿಷಯ: ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಕಾಲೇಜು (ಸ್ವಾಯತ್ತ), ಉಜಿರೆ ಇಲ್ಲಿ ಶೈಕ್ಷಣಿಕ ವರ್ಷ 2022-23ನೇ ಸಾಲಿನಿಂದ ಬಿ.ಕಾಂ. ಕಾರ್ಯಕ್ರಮದ 80 ವಿದ್ಯಾರ್ಥಿಗಳ ವಿಭಾಗಕ್ಕೆ 10 ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿ (ಸ್ವಾಯತ್ತ ಸ್ಥಾನಮಾನದೊಂದಿಗೆ) ನೀಡುವ ಬಗ್ಗೆ.

ನಿರ್ಣಯ: ದಿನಾಂಕ 27.09.2022ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:17(2022)**

ವಿಷಯ: ಸಂತ ಅಲೋಶಿಯಸ್ ಕಾಲೇಜು (ಸ್ವಾಯತ್ತ), ಮಂಗಳೂರು ಇಲ್ಲಿ M.Sc. Data Science ಎಂಬ ಹೊಸ ಕಾರ್ಯಕ್ರಮವನ್ನು ಪ್ರಾರಂಭಿಸುವ ಬಗ್ಗೆ.

ನಿರ್ಣಯ: ದಿನಾಂಕ 27.09.2022ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:18(2022)**

ವಿಷಯ: Manel Srinivas Nayak Institute of Management, ಮಂಗಳೂರು ಇಲ್ಲಿರುವ ಸ್ನಾತಕೋತ್ತರ ವ್ಯವಹಾರ ಆಡಳಿತ ವಿಭಾಗವನ್ನು ಪಿಹೆಚ್.ಡಿ. ವ್ಯಾಸಂಗದ ಸಂಶೋಧನಾ ಕೇಂದ್ರವನ್ನಾಗಿ ಮಾನ್ಯತೆ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:19(2022)**

ವಿಷಯ: ಎ.ಜೆ. ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್, ಮಂಗಳೂರು ಇಲ್ಲಿರುವ ಸ್ನಾತಕೋತ್ತರ ವ್ಯವಹಾರ ಆಡಳಿತ ವಿಭಾಗವನ್ನು ಪಿಹೆಚ್.ಡಿ. ವ್ಯಾಸಂಗಕ್ಕೆ ಸಂಶೋಧನಾ ಕೇಂದ್ರವನ್ನಾಗಿ ಮಾನ್ಯತೆ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:20(2022)**

ವಿಷಯ: ಪೂರ್ಣಪ್ರಜ್ಞ ಕಾಲೇಜು, ಉಡುಪಿ, ಇಲ್ಲಿರುವ ಸ್ನಾತಕೋತ್ತರ Commerce/ Management ಹಾಗೂ Mathematics ವಿಭಾಗಗಳನ್ನು ಪಿಹೆಚ್.ಡಿ. ವ್ಯಾಸಂಗಕ್ಕೆ ಸಂಶೋಧನಾ ಕೇಂದ್ರವನ್ನಾಗಿ ಮಾನ್ಯತೆ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:21(2022)**

ವಿಷಯ: ಸಂತ ಫಿಲೋಮಿನ ಕಾಲೇಜು, ಪುತ್ತೂರು ಇಲ್ಲಿರುವ ಸ್ನಾತಕೋತ್ತರ ಭೌತಶಾಸ್ತ್ರ ವಿಭಾಗವನ್ನು ಪಿಹೆಚ್.ಡಿ. ವ್ಯಾಸಂಗಕ್ಕೆ ಸಂಶೋಧನಾ ಕೇಂದ್ರವನ್ನಾಗಿ ಮಾನ್ಯತೆ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:22(2022)**

ವಿಷಯ: SDM College of Business Management Post Graduate Centre for Management Studies and Research, ಮಂಗಳೂರು ಇಲ್ಲಿರುವ ಸ್ನಾತಕೋತ್ತರ ವ್ಯವಹಾರ ಆಡಳಿತ ವಿಭಾಗವನ್ನು ಪಿಹೆಚ್.ಡಿ. ವ್ಯಾಸಂಗದ ಸಂಶೋಧನಾ ಕೇಂದ್ರವನ್ನಾಗಿ ಮಾನ್ಯತೆ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ : ಸಾ.ಸ.7:23(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿ ಬಹುಶಿಸ್ತೀಯ (Multi disciplinary) ಸ್ನಾತಕ ಕಾರ್ಯಕ್ರಮಕ್ಕೆ ವಿದ್ಯಾರ್ಥಿ ಪರಿಮಿತಿಯನ್ನು ನಿಗದಿಪಡಿಸುವ ಬಗ್ಗೆ.

ನಿರ್ಣಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿ ಬಹುಶಿಸ್ತೀಯ (Multi disciplinary)ಸ್ನಾತಕ ಕಾರ್ಯಕ್ರಮಕ್ಕೆ 60 ವಿದ್ಯಾರ್ಥಿ ಪರಿಮಿತಿಯನ್ನು ನಿಗದಿಪಡಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಾರ್ವತ್ರಿಕ : ಸಾ.ಸ.7:24(2022)**

ವಿಷಯ: The 25th edition of Tech Fest – Bengaluru Tech Summit 2022 ಕಾರ್ಯಕ್ರಮದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯ ಭಾಗವಹಿಸುವ ಬಗ್ಗೆ.

ನಿರ್ಣಯ: ರೂ. 5,00,000.00 (ರೂಪಾಯಿ ಐದು ಲಕ್ಷ ಮಾತ್ರ) ಪ್ರಾಯೋಜಕತ್ವ ಶುಲ್ಕ ನೀಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ : ಸಾ.ಸ.7:25(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸ್ನಾತಕೋತ್ತರ ಜೈವಿಕ ತಂತ್ರಜ್ಞಾನ ಅಧ್ಯಯನ ಮತ್ತು ಸಂಶೋಧನಾ ವಿಭಾಗ ಸ್ಥಾಪನೆ ಮತ್ತು ಹುದ್ದೆಗಳ ಸೃಜನೆ ಬಗ್ಗೆ ರಚಿಸಿದ ಪರಿನಿಯಮದ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ : ಸಾ.ಸ.7:26(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸ್ನಾತಕೋತ್ತರ ಫುಡ್ ಸಾಯನ್ಸ್ ಮತ್ತು ನ್ಯೂಟ್ರಿಷನ್ ಅಧ್ಯಯನ ಮತ್ತು ಸಂಶೋಧನಾ ವಿಭಾಗ ಸ್ಥಾಪನೆ ಮತ್ತು ಹುದ್ದೆಗಳ ಸೃಜನೆ ಬಗ್ಗೆ ರಚಿಸಿದ ಪರಿನಿಯಮದ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ : ಸಾ.ಸ.7:27(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಪ್ರಾಚೀನ ಇತಿಹಾಸ ಮತ್ತು ಪುರಾತತ್ವಶಾಸ್ತ್ರ ಸ್ನಾತಕೋತ್ತರ ವಿಭಾಗ ಸ್ಥಾಪನೆ ಮತ್ತು ಹುದ್ದೆಗಳ ಸೃಜನೆ ಬಗ್ಗೆ ರಚಿಸಿದ ಪರಿನಿಯಮದ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ : ಸಾ.ಸ.7:28(2022)**

ವಿಷಯ: ಡಾ. ಸಿ. ಜಗತ್ ತಿಮ್ಮಯ್ಯ, ಪ್ರಭಾರ ಪ್ರಾಂಶುಪಾಲರು ಹಾಗೂ ಸಹ ಪ್ರಾಧ್ಯಾಪಕರು, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇವರಿಗೆ ವಿಶ್ವವಿದ್ಯಾನಿಲಯದ ಸೇವೆಯಿಂದ ಸ್ವಯಂ ನಿವೃತ್ತಿ ಹೊಂದಲು ಅನುಮತಿ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ : ಸಾ.ಸ.7:29(2022)**

ವಿಷಯ: ಶ್ರೀ ಕೆ. ಸುಧಾಕರ, ಶೀಘ್ರಲಿಪಿಗಾರರು, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಮಾನ್ಯ ಲೋಕಸಭಾ ಸದಸ್ಯರಾದ ಶ್ರೀ ನಳಿನ್ ಕುಮಾರ್ ಕಟೀಲ್ ಇವರ ಆಪ್ತ ಸಹಾಯಕರಾಗಿ ನಿಯೋಜನೆ ಮೇರೆಗೆ ನೇಮಿಸಿರುವ ಅವಧಿಯನ್ನು ವಿಸ್ತರಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಡಿಇವಿ : ಸಾ.ಸ.7:30(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ಲಕ್ಷ್ಮೀ ಮೆಮೋರಿಯಲ್ ಕಾಲೇಜ್ ಆಫ್ ಫಿಸಿಯೋಥೆರಪಿ, ಮಂಗಳೂರು ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಡಿಇವಿ : ಸಾ.ಸ.7:31(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಮತ್ತು Sharada Yoga & Naturopathy Medical College, Hospital and Research Centre, Mangaluru ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಕಾನೂನು ಘಟಕ : ಸಾ.ಸ.7:32(2022)**

ವಿಷಯ: ಶ್ರೀಮತಿ ಸುಧಾ ಯು., H.O.D., ರಾಜ್ಯಶಾಸ್ತ್ರ ವಿಭಾಗ, ಗೋವಿಂದದಾಸ್ ಕಾಲೇಜು, ಸುರತ್ಕಲ್ ಇವರು State of Karnataka Commissioner represented by Department of Collegiate Education, Bangalore ಹಾಗೂ ಇತರರ ವಿರುದ್ಧ ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಹೂಡಿರುವ ರಿಟ್ ಅರ್ಜಿ ಸಂ. 3446/2021(S-RES) ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ: ಸಾ.ಸ.7:33(2022)**

ವಿಷಯ: ಡಾ. ಐರಾಣಿ ಮೊಹಮ್ಮದ್ ಖಾನ್, ಹಿಂದಿನ ಕುಲಸಚಿವರು ಹಾಗೂ ಪ್ರಾಧ್ಯಾಪಕರು, ಇಲೆಕ್ಟ್ರಾನಿಕ್ಸ್ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರ ಮೇಲಿನ ಕರ್ತವ್ಯ ಲೋಪದ ಆರೋಪದ ಬಗೆಗಿನ ಇಲಾಖಾ ವಿಚಾರಣೆ ಕುರಿತು.

ನಿರ್ಣಯ: ಪ್ರಸ್ತಾವನೆಯನ್ನು ವಿಸ್ತೃತವಾಗಿ ಚರ್ಚಿಸಲಾಯಿತು. ಈ ಬಗ್ಗೆ ಮುಂದಿನ ಸೂಕ್ತ ಕ್ರಮವನ್ನು ನಿಯಮಾನುಸಾರ ಕೈಗೊಳ್ಳಲು ಮಾನ್ಯ ಕುಲಪತಿಗಳಿಗೆ ಅಧಿಕಾರ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ: ಸಾ.ಸ.7:34(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಿಯೋಜನೆ ಮೇರೆಗೆ ವಿಶೇಷಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಆಡಳಿತದಲ್ಲಿ ಸಲ್ಲಿಸಿದ ಸೇವೆಯ ನಿಯೋಜನೆ ಅವಧಿಯನ್ನು ಶ್ರೇಣಿಕರಣದ (ಎ.ಪಿ.ಎ. ಅಂಕ) ಮೌಲ್ಯಮಾಪನದಿಂದ ಹೊರಗಿಟ್ಟು ಪದೋನ್ನತಿ ನೀಡುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಗಮನಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ: ಸಾ.ಸ.7:35(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿ ಹುದ್ದೆಯ ಪ್ರಭಾರವನ್ನು ವಹಿಸಿದ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ: ಸಾ.ಸ.7:36(2022)**

ವಿಷಯ: ಡಾ. ಉಮೇಶ ನಾಯ್ಕ್, ಸಹಾಯಕ ಪ್ರಾಧ್ಯಾಪಕರು, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿಭಾಗ ಇವರಿಗೆ ಸಿ.ಎ.ಎಸ್.ನಡಿಯಲ್ಲಿ ಸಹಾಯಕ ಪ್ರಾಧ್ಯಾಪಕ ಹಂತ 3 ರಿಂದ ಸಹ ಪ್ರಾಧ್ಯಾಪಕರು ಹಂತ 4ಕ್ಕೆ ಪದೋನ್ನತಿ ನೀಡುವ ಬಗ್ಗೆ ಆಯ್ಕೆ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ: ಸಾ.ಸ.7:37(2022)**

ವಿಷಯ: ಡಾ. ಐ.ಕೆ. ಮಂಜುಳಾ, ಸೂಕ್ಷ್ಮಾಣು ಜೀವವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಕೇಂದ್ರ, ಇವರಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂನಡಿಯಲ್ಲಿ ನೀಡಿರುವ ಪದೋನ್ನತಿ ದಿನಾಂಕವನ್ನು

ಮರುನಿಗದಿಪಡಿಸಿದ ಸ್ಕ್ರೀನಿಂಗ್-ಕಂ-ಇವ್ಯಾಲ್ಯುವೇಶನ್ ಸಮಿತಿಯ ಶಿಫಾರಸ್ಸನ್ನು ಅನುಮೋದಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ: ಸಾ.ಸ.7:38(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸ್ನಾತಕೋತ್ತರ ಮೊಲಿಕ್ಯುಲರ್ ಬಯೋಲಜಿ (Molecular Biology) ವಿಭಾಗ ಸ್ಥಾಪನೆ ಮತ್ತು ಹುದ್ದೆಗಳ ಸೃಜನೆ ಬಗ್ಗೆ ರಚಿಸಿದ ಪರಿನಿಯಮದ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಆಡಳಿತ : ಸಾ.ಸ.7:39(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿರುವ ಹಳೇ ಪೀಠೋಪಕರಣಗಳು ಹಾಗೂ Laboratory Waste ಗಳನ್ನು ವಿಲೇವಾರಿ ಮಾಡಲು ಅನುಮತಿ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಆಡಳಿತ : ಸಾ.ಸ.7:40(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ BSNL ಸಂಸ್ಥೆಯಿಂದ ಅಳವಡಿಸಲಾದ ಸ್ಥಿರದೂರವಾಣಿ ಸಂಪರ್ಕವನ್ನು ದುರಸ್ತಿಗೊಳಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು : ಸಾ.ಸ.7:41(2022)**

ವಿಷಯ: ಸ್ನಾತಕೋತ್ತರ ಸಮಾಜ ಕಾರ್ಯ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಬಗ್ಗೆ.

ನಿರ್ಣಯ: ಸ್ನಾತಕೋತ್ತರ ಸಮಾಜ ಕಾರ್ಯ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು : ಸಾ.ಸ.7:42(2022)**

ವಿಷಯ: ಪ್ರೊ. ವಿಶ್ವನಾಥ, ಸಿಂಡಿಕೇಟು ಸದಸ್ಯರು - ಇವರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ.

ಪ್ರಸ್ತಾವನೆ 1 ದಿನಾಂಕ 23.12.2016ರಂದು ಚೀಫ್ ಮ್ಯಾನೇಜರ್ T.F.C.E.C. Branch, State Bank of Mysore, ಬೆಂಗಳೂರು ಇವರು ಎಕ್ಸಿಕ್ಯೂಟಿವ್ ಇಂಜಿನಿಯರ್, ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ ಬರೆದಿರುವ ಪತ್ರದ ಪ್ರಕಾರ ಮುಂದಿನ ಸೂಕ್ತ ಕ್ರಮಕ್ಕಾಗಿ ಸಂಬಂಧಿತ ಕಡತ ಮತ್ತು ಸೂಕ್ತ ದಾಖಲೆಗಳನ್ನು ಕುಲಸಚಿವರು ಸಭೆಗೆ ಮಂಡಿಸುವುದು.

| | |
|---|---|
| ನಿರ್ಣಯ: | ಸಭೆಗೆ ಮಂಡಿಸಿದ ಕಡತಗಳನ್ನು ಪರಿಶೀಲಿಸಿ, ಪ್ರಸ್ತಾವನೆಯನ್ನು ವಿಸ್ತೃತವಾಗಿ ಚರ್ಚಿಸಲಾಯಿತು. ಚೀಫ್ ಮ್ಯಾನೇಜರ್ T.F.C.E.C. Branch, State Bank of Mysore, ಬೆಂಗಳೂರು ಇವರ ಪತ್ರದಲ್ಲಿ ನಮೂದಿಸಿರುವ ಬ್ಯಾಂಕ್ ಗ್ಯಾರಂಟಿಗಳು ನಕಲಿಯಾಗಿರುವುದಾಗಿ ತಿಳಿಸಿರುವುದರಿಂದ ಈ ಕೆಳಗಿನ ಗುತ್ತಿಗೆದಾರ ಸಂಸ್ಥೆಗಳ ಮೇಲೆ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸಿ ಮುಂದಿನ ಸಿಂಡಿಕೇಟು ಸಭೆಗೆ ಮಾಹಿತಿ ಒದಗಿಸುವಂತೆ ನಿರ್ಣಯಿಸಲಾಯಿತು.<br>1. M/s. SSR Interifor & Exterior, #1, Ramakrishnappa Layout, 'B' Block, Mangala Main Road, Nagarabhavi, 2nd Stage, Bangalore,<br>2. M/s. Net Systems, 1st Floor, Shivabagh Commercial Complex Kadri, Mangalore,<br>3. M/s. Total IT Solution #7, Annapoorneswari Nilaya, 9th Cross, 20th Main, BTM Layout, Ist Stage, Bengaluru,<br>4. Sri Nimishamba Interiors, # 31/5, 60 Feet Road, 7th block, Muddayyanapalya Ext. Layout, Vishwaneedam post, Bangalore – 560091. |
| ಪ್ರಸ್ತಾವನೆ 2 | ದಿನಾಂಕ 01.01.2015ರಿಂದ 31.7.2022ರವರೆಗಿನ ಮಂಗಳೂರು ವಿಶ್ವವಿದ್ಯಾನಿಲಯದ "Pension Fund" ನ ವಾರ್ಷಿಕವಾರು ಠೇವಣಿ ಮತ್ತು ವೆಚ್ಚದ ವಿವರಗಳನ್ನು ಸೂಕ್ತ ದಾಖಲೆಗಳೊಂದಿಗೆ ಸಭೆಗೆ ಮಂಡಿಸುವುದು. |
| ನಿರ್ಣಯ: | 01.01.2015ರಿಂದ 31.7.2022ರವರೆಗೆ ಸರಕಾರದಿಂದ ಸ್ವೀಕೃತವಾಗಿರುವ "Pension Fund" ಠೇವಣಾತಿ ಮತ್ತು ಖರ್ಚುಗಳ ವಿವರಗಳು, ಯಾವ ಉದೇಶಕ್ಕಾಗಿ ಠೇವಣಿಗಳನ್ನು ಬಳಸಲಾಗಿದೆ ಎಂಬ ವಿವರಗಳ ತಃಖ್ತೆಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ನಿರ್ಣಯಿಸಲಾಯಿತು. |
| ಪ್ರಸ್ತಾವನೆ 3 | 1.07.2014 ರಿಂದ 31.07.2022 ರವರೆಗಿನ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಹೊರಗುತ್ತಿಗೆ ಮತ್ತು ತಾತ್ಕಾಲಿಕ ನೆಲೆಯಲ್ಲಿ ನೇಮಕಗೊಂಡಿರುವ ಬೋಧಕೇತರ ನೌಕರರ ವಿವರಗಳನ್ನು ಪ್ರತ್ಯೇಕವಾಗಿ ಹೆಸರು ವಿದ್ಯಾರ್ಹತೆ, ಹುದ್ದೆ, ಹುಟ್ಟಿದ ದಿನಾಂಕ, ಅವರು ಬರುವ ಮೀಸಲಾತಿ ಪ್ರವರ್ಗ ಹಾಗೂ ಅವರ ವಿಳಾಸಗಳ ಸಹಿತ ದಾಖಲೆಗಳೊಂದಿಗೆ ಮತ್ತು ಹೊರಗುತ್ತಿಗೆ ನೇಮಕಾತಿಗೆ ಸಂಬಂಧಪಟ್ಟ ಹಾಗೆ ಸರ್ಕಾರದ ಆದೇಶಗಳನ್ನು ಸಭೆಗೆ ಮಂಡಿಸುವುದು. |
| ನಿರ್ಣಯ: | ಸಭೆಗೆ ಮಂಡಿಸಲಾದ ದಾಖಲೆಗಳನ್ನು ಪರಿಶೀಲಿಸಲಾಗಿ, ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ತಾತ್ಕಾಲಿಕ ಮತ್ತು ಹೊರಗುತ್ತಿಗೆ ನೇಮಕಾತಿಗಳಲ್ಲಿ ಸರಕಾರದ ನಿಯಮಗಳುಸಾರ ಮೀಸಲಾತಿ ವರ್ಗಾವಾರು ಪ್ರಾತಿನಿಧ್ಯತೆ |

ಇಲ್ಲದಿರುವುದರಿಂದ ಸರ್ಕಾರದ ನಿಯಮಗಳಂತೆ ಮುಂದಿನ ನೇಮಕಾತಿಗಳಲ್ಲಿ ಈ ವರ್ಗಾವಾರು ಮೀಸಲಾತಿ ತಾರತಮ್ಯಗಳನ್ನು ಹೋಗಲಾಡಿಸಿ ಎಲ್ಲಾ ಮೀಸಲಾತಿ ವರ್ಗಗಳಿಗೆ (ಎಸ್.ಸಿ./ಎಸ್.ಟಿ., cat-1, IIA, IIB, IIIA, IIIB ವರ್ಗಗಳೂ ಸೇರಿದಂತೆ) ನಿಯಮಾನುಸಾರ ಸಿಗಬೇಕಾದ ಪ್ರಾತಿನಿಧ್ಯವನ್ನು ಪಾಲಿಸಬೇಕೆಂದು ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು: ಸಾ.ಸ.7:43(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ಅಧ್ಯಯನ ವಿಭಾಗಗಳಿಗೆ ಅಧ್ಯಕ್ಷರುಗಳ ನೇಮಕಾತಿ ಬಗ್ಗೆ.

ನಿರ್ಣಯ: ಮಂಗಳೂರು ವಿಶ್ವವಿದ್ಯಾನಿಲಯದ ಈ ಕೆಳಗಿನ ಸ್ನಾತಕೋತ್ತರ ಅಧ್ಯಯನ ವಿಭಾಗಗಳಿಗೆ ದಿನಾಂಕ 01.01.2023ರಿಂದ ಅನ್ವಯವಾಗುವಂತೆ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಸೂಚಿಸಿರುವ ಅಧ್ಯಕ್ಷರುಗಳನ್ನು ನೇಮಕಾತಿ ಮಾಡಲಾಯಿತು.

| **ಕ್ರ. ಸಂ.** | **ಸ್ನಾತಕೋತ್ತರ ಅಧ್ಯಯನ ವಿಭಾಗ** | **ಅಧ್ಯಕ್ಷರ ಹೆಸರು** |
|---|---|---|
| 1. | ಅರ್ಥಶಾಸ್ತ್ರ | ಪ್ರೊ. ವಿಶ್ವನಾಥ |
| 2. | ಸಮಾಜ ಕಾರ್ಯ | ಡಾ. ಮೋಹನ್ ಎಸ್. ಸಿಂಘೆ |
| 3. | ಇತಿಹಾಸ | ಪ್ರೊ. ಕೆ. ಎಂ. ಲೋಕೇಶ್ (ದಿನಾಂಕ 30.06.2023ರವರೆಗೆ (ವಯೋನಿವೃತ್ತಿ ದಿನಾಂಕ)) |
| 4. | ರಸಾಯನಶಾಸ್ತ್ರ | ಪ್ರೊ. ವಿಶಾಲಾಕ್ಷಿ ಬಿ. |
| 5. | ಭೌತಶಾಸ್ತ್ರ | ಪ್ರೊ. ಸಂಗಪ್ಪ |
| 6. | ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ | ಡಾ. ಉಮೇಶ್ ನಾಯ್ಕ್ |
| 7. | ಆನ್ವಯಿಕ ಸಸ್ಯಶಾಸ್ತ್ರ | ಪ್ರೊ. ರಾಜು ಕೃಷ್ಣ ಚಲನ್ನವರ್ |

**ಕಾರ್ಯಸೂಚಿ ಸಂಖ್ಯೆ: ಕಾನೂನು ಘಟಕ: ಸಾ.ಸ.7:44(2022)**

ವಿಷಯ: ಗ್ರಾಮೀಣ ಬ್ಯಾಂಕಿಂಗ್ ಮತ್ತು ನಿರ್ವಹಣಾ ಪೀಠ, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿ ತಾತ್ಕಾಲಿಕ ನೆಲೆಯಲ್ಲಿ ಬೆರಳಚ್ಚುಗಾರ-ವಾ-ಗುಮಾಸ್ತರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಸೀತಾರಾಮ ಎಂ., ಇವರು ತಮ್ಮ

ನಿವೃತ್ತಿ ಸೌಲಭ್ಯ, ಮಾಸಿಕ ಪಿಂಚಣಿ ಹಾಗೂ ವೇತನ ವ್ಯತ್ಯಾಸದ ಮೊತ್ತ ಬೇಡಿಕೆಯ ಕುರಿತು ಮಂಗಳೂರು ವಿಶ್ವವಿದ್ಯಾನಿಲಯದ ವಿರುದ್ಧ ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂ. : 9330/2022(S-RES) ಯಲ್ಲಿ ಕೋರಿರುವ ನಿವೃತ್ತಿ ಸೌಲಭ್ಯಗಳನ್ನು ಪರಿಗಣಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.7:45(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್, ಬೆಂಗಳೂರು ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಇಡಿ: ಸಾ.ಸ.7:46(2022)**

ವಿಷಯ: Proposed construction of toilet building for Health Center at Mangalore University Campus – ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

ಅಂದಾಜು ಮೊತ್ತ ರೂ. 8.20 ಲಕ್ಷ

ನಿರ್ಣಯ: ದಿನಾಂಕ 28.10.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ: ಇಡಿ: ಸಾ.ಸ.7:47(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣದ “ಇ” ಮಾದರಿ ವಸತಿಗೃಹ ಬ್ಲಾಕ್ ಸಂಖ್ಯೆ 1 ಮತ್ತು 6 ರ ಅಗತ್ಯದ ದುರಸ್ತಿ ಹಾಗೂ ನಿರ್ವಹಣಾ ಕಾಮಗಾರಿ - ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

ಅಂದಾಜು ಮೊತ್ತ ರೂ. 38.30 ಲಕ್ಷಗಳು

ನಿರ್ಣಯ: ದಿನಾಂಕ 28.10.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಇಡಿ: ಸಾ.ಸ.7:48(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣದ "ಡಿ" ಮಾದರಿ ವಸತಿಗೃಹ ಬ್ಲಾಕ್ ಸಂಖ್ಯೆ 1 ರಿಂದ 8 ಹಾಗೂ "ಇ" ಮಾದರಿ ವಸತಿಗೃಹ ಬ್ಲಾಕ್ ಸಂಖ್ಯೆ 2 ಮತ್ತು 4 ರ ಮೆಟ್ಟಿಲು ಕೊಠಡಿಗಳಿಗೆ ಹಾಗೂ ಮುಂಭಾಗದ ಛಾವಣಿಯ ಅಂಚಿಗೆ ಶೀಟ್ ಛಾವಣಿ ಅಳವಡಿಸುವ ಕಾಮಗಾರಿ - ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

ಅಂದಾಜು ಮೊತ್ತ ರೂ. 13.20 ಲಕ್ಷಗಳು

ನಿರ್ಣಯ: ದಿನಾಂಕ 28.10.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಇಡಿ: ಸಾ.ಸ.7:49(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣದ ಉದ್ಯೋಗಸ್ಥ ಮಹಿಳಾ ವಸತಿನಿಲಯ ಮತ್ತು ಮಹಿಳಾ ವಸತಿನಿಲಯಗಳಿಗೆ ಪೂರಕವಾಗುವಂತೆ 100KLD ಸಾಮರ್ಥ್ಯದ STP ಯನ್ನು ಡ್ರೈನೇಜ್ ವ್ಯವಸ್ಥೆಯೊಂದಿಗೆ ಅಳವಡಿಸುವುದು.

ಅಂದಾಜು ಮೊತ್ತ ರೂ. 98.00 ಲಕ್ಷ

ನಿರ್ಣಯ: ದಿನಾಂಕ 28.10.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಇಡಿ: ಸಾ.ಸ.7:50(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣದ ಉದ್ಯೋಗಸ್ಥ ಮಹಿಳಾ ವಸತಿನಿಲಯಕ್ಕೆ 35,000 ಲೀ ಸಾಮರ್ಥ್ಯದ (RCC over head tank) ಎತ್ತರದ ನೀರಿನ ತೊಟ್ಟಿಯನ್ನು ಅಗತ್ಯದ ಸಂಪರ್ಕ ಕೊಳವೆಗಳ ಸಮೇತ ನಿರ್ಮಿಸುವುದು - ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

ಅಂದಾಜು ಮೊತ್ತ ರೂ. 38.20 ಲಕ್ಷ

ನಿರ್ಣಯ: ದಿನಾಂಕ 28.10.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಇಡಿ: ಸಾ.ಸ.7:51(2022)**

ವಿಷಯ: ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿನ ಆವರಣದಲ್ಲಿ 35,000 ಲೀಟರ್ ಸಾಮರ್ಥ್ಯದ RCC ಎತ್ತರದ ನೀರಿನ ತೊಟ್ಟಿ (RCC OH tank) ಯನ್ನು ನಿರ್ಮಿಸುವುದು ಮತ್ತು ಅಗತ್ಯದ ನೀರು ಸರಬರಾಜು ಕೊಳವೆಗಳನ್ನು ಅಳವಡಿಸುವುದು.

ಅಂದಾಜು ಮೊತ್ತ ರೂ. 37,50,000.00

ನಿರ್ಣಯ: ದಿನಾಂಕ 28.10.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಇಡಿ: ಸಾ.ಸ.7:52(2022)**

ವಿಷಯ: Construction of Shree Narayana Guru Adhyayana Peeta Building at Mangalore University Campus Mangalagangothri – Extension Work – ಟೆಂಡರು ಅಂಗೀಕರಿಸುವ ಬಗ್ಗೆ.

ನಿರ್ಣಯ: ದಿನಾಂಕ 28.10.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಇಡಿ: ಸಾ.ಸ.7:53(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಅಧೀನಕ್ಕೆ ಒಳಪಟ್ಟಿರುವ ಸ್ನಾತಕೋತ್ತರ ಕೇಂದ್ರ ಚಿಕ್ಕ ಅಳುವಾರ ಇಲ್ಲಿನ ಆವರಣದೊಳಗಿನ ರಸ್ತೆಗಳಿಗೆ ಹೊಸದಾಗಿ ವಿದ್ಯುತ್ ಕಂಬನೆಟ್ಟು ದಾರಿದೀಪಗಳನ್ನು ಅಳವಡಿಸುವ ಕಾಮಗಾರಿ- ಟೆಂಡರ್ ಅಂಗೀಕರಿಸುವ ಬಗ್ಗೆ.

ನಿರ್ಣಯ: ಮುಂದೂಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಇಡಿ: ಸಾ.ಸ.7:54(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ Food Court ನಿರ್ಮಾಣಕ್ಕಾಗಿ ಮಂಗಳ ಕ್ಯಾಂಟೀನ್ ಹಿಂಭಾಗದಲ್ಲಿ ವಿಸ್ತರಣಾ ಕಾಮಗಾರಿ - ಟೆಂಡರು ಅಂಗೀಕರಿಸುವ ಬಗ್ಗೆ.

ನಿರ್ಣಯ: ದಿನಾಂಕ 28.10.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಇಡಿ: ಸಾ.ಸ.7:55(2022)**

ವಿಷಯ: Supplying and commissioning of 250 KVA DG set to Mangala Auditorium at Mangalore University Campus – ಟೆಂಡರು ಅಂಗೀಕರಿಸುವ ಬಗ್ಗೆ.

ನಿರ್ಣಯ: ಉತ್ತಮ ಗುಣಮಟ್ಟದ ಉಪಕರಣವನ್ನು ಅಳವಡಿಸುವ ಷರತ್ತಿನ ಮೇರೆಗೆ ದಿನಾಂಕ 28.10.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಇಡಿ: ಸಾ.ಸ.7:56(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣಕ್ಕೆ ಸಂಬಂಧಿಸಿದ ಗುತ್ತಿಗೆ ಕಾಮಗಾರಿಗಳಲ್ಲಿ ದಿನಾಂಕ 18.07.2022 ರಿಂದ ಅನ್ವಯವಾಗುವಂತೆ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಸರಕು ಮತ್ತು ಸೇವಾ ತೆರಿಗೆಗಳನ್ನು 12% ರಿಂದ 18% ಕ್ಕೆ ಪರಿಷ್ಕರಿಸುವ ಬಗ್ಗೆ.

ನಿರ್ಣಯ: ದಿನಾಂಕ 28.10.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಇಡಿ: ಸಾ.ಸ.7:57(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣಕ್ಕೆ ಸಂಬಂಧಿಸಿದ ಗುತ್ತಿಗೆ ಕಾಮಗಾರಿಗಳಲ್ಲಿ ದಿನಾಂಕ 18.07.2022 ರಿಂದ ಅನ್ವಯವಾಗುವಂತೆ ಪರಿಷ್ಕೃತ ಜಿ.ಎಸ್.ಟಿ. ಯಿಂದಾಗಿ ರೂ. 5.00 ಲಕ್ಷ ಮೀರಿದ ಪ್ರಸ್ತುತ ಚಾಲ್ತಿಯಲ್ಲಿರುವ 2021-22 ದರಪಟ್ಟಿಯಂತೆ ತಯಾರಿಸಲಾದ ಪರಿಷ್ಕೃತ ಅಂದಾಜುಪಟ್ಟಿ ಹಾಗೂ ಟೆಂಡರು ಕಾಮಗಾರಿಗಳಿಗೆ ಯಥಾಸ್ಥಿತಿಯಲ್ಲಿ ಅನುಮೋದನೆ ನೀಡುವ ಬಗ್ಗೆ.

ನಿರ್ಣಯ: ದಿನಾಂಕ 28.10.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಸಿಂಡಿಕೇಟು: ಸಾ.ಸ.7:58(2022)**

ವಿಷಯ: ಡಾ. ಶಂಕರ ಭಟ್ ಪಿ., ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ವರ್ಗಾವಣೆ ಪ್ರವೇಶ ಪಡೆಯುವವರಿಗೆ ಶುಲ್ಕ ವಿನಾಯಿತಿ ಮಾಡುವ ಕುರಿತು.

ಪ್ರಸ್ತಾವನೆ 1 ಸರಕಾರಿ ಕಾಲೇಜಿಗೆ ವರ್ಗಾವಣೆ ಪ್ರವೇಶಕ್ಕೆ ಶುಲ್ಕ ವಿನಾಯಿತಿ ನೀಡುವ ಬಗ್ಗೆ.

ನಿರ್ಣಯ: ಮಂಗಳೂರು ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ ಕಾಲೇಜುಗಳಲ್ಲಿ ವರ್ಗಾವಣಾ ಪ್ರವೇಶಾತಿ ಶುಲ್ಕವನ್ನು ರೂ.1,000.00 (ರೂಪಾಯಿ ಒಂದು ಸಾವಿರ ಮಾತ್ರ) ಎಂದು ನಿಗದಿಪಡಿಸಿ ಪ್ರಸ್ತಾವನೆಯನ್ನು ಶುಲ್ಕ ಪರಿಷ್ಕರಣಾ ಸಮಿತಿಗೆ ಮಂಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:59(2022)**

ವಿಷಯ: ಮಂಗಳ ಅಲುಮ್ನಿ ಅಸೋಸಿಯೇಶನ್ ವತಿಯಿಂದ ಮಂಗಳೂರು ವಿಶ್ವವಿದ್ಯಾನಿಲಯದ ಆವರಣದ ಜಮೀನಿನಲ್ಲಿ ಮಂಗಳಾ ಅಲುಮ್ನಿ ಭವನ ನಿರ್ಮಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ತತ್ಸಂಬಂಧ, ವಿಶ್ವವಿದ್ಯಾನಿಲಯದ ಅಧಿಕಾರಿಗಳ ತಂಡವು ಮಂಗಳ ಅಲುಮ್ನಿ ಭವನ ನಿರ್ಮಿಸಲು ಸೂಕ್ತ ಸ್ಥಳವನ್ನು ನಿರ್ಧರಿಸಬೇಕೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಾರ್ವತ್ರಿಕ: ಸಾ.ಸ.7:60(2022)**

ವಿಷಯ: ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು, ಇಲ್ಲಿನ ವಾರ್ಷಿಕ ಸಂಚಿಕೆ "ಮಂಗಳ ಗಂಗೆ" ಮುದ್ರಿಸುವ ಕುರಿತು.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಾರ್ವತ್ರಿಕ: ಸಾ.ಸ.7:61(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಅಂತರಾಷ್ಟ್ರೀಯ ವಿದ್ಯಾರ್ಥಿಗಳು ವಾಸ್ತವ್ಯವಿರುವ ಎ.ಎಸ್.ಕೆ. ಟವರ್ಸ್, ನಾಟೆಕಲ್ ಇಲ್ಲಿಯ ಕಟ್ಟಡದ 08 ಸಂಖ್ಯೆ ಫ್ಲಾಟ್‌ಗಳ ಕರಾರು ಒಪ್ಪಂದದ ಅವಧಿಯನ್ನು ಮುಂದಿನ 11 ತಿಂಗಳ ಅವಧಿಗೆ ಮುಂದುವರಿಸುವ ಬಗ್ಗೆ.

ನಿರ್ಣಯ: ಕರಾರು ಒಪ್ಪಂದವನ್ನು ಮೂರು ತಿಂಗಳ ಅವಧಿ (ಜನವರಿ 2023ರವರೆಗೆ)ಗೆ ಸೀಮಿತಗೊಳಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಸಾರ್ವತ್ರಿಕ: ಸಾ.ಸ.7:62(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಅಂತರಾಷ್ಟ್ರೀಯ ವಿದ್ಯಾರ್ಥಿಗಳು ವಾಸ್ತವ್ಯವಿರುವ ವೆಂಕಟ್ ರೆಸಿಡೆನ್ಸಿ ಕಟ್ಟಡದ ಕರಾರು ಒಪ್ಪಂದದ ಅವಧಿಯನ್ನು ಮುಂದಿನ 11 ತಿಂಗಳ ಅವಧಿಗೆ ಮುಂದುವರಿಸುವ ಬಗ್ಗೆ.

ನಿರ್ಣಯ: ಕರಾರು ಒಪ್ಪಂದವನ್ನು ಮೂರು ತಿಂಗಳ ಅವಧಿ (ಜನವರಿ 2023ರವರೆಗೆ)ಗೆ ಸೀಮಿತಗೊಳಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಆಡಳಿತ: ಸಾ.ಸ.7:63(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 2023ನೇ ಸಾಲಿನ ಡೈರಿ ಮತ್ತು ಗೋಡೆ ಕ್ಯಾಲೆಂಡರ್ ಮುದ್ರಣದ ಕುರಿತು ದರಪಟ್ಟಿಗೆ ಮಂಜೂರಾತಿ ನೀಡುವ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಆಡಳಿತ: ಸಾ.ಸ.7:64(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಕಾರ್ಯಕಾರಿ ಅಭಿಯಂತರರ ಕಛೇರಿಗೆ ಪೀಠೋಪಕರಣಗಳ ಖರೀದಿಗೆ ಮಂಜೂರಾತಿ ನೀಡುವ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು

ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:65(2022)**

ವಿಷಯ: NMR Instrumentation Centre ಉಪಕರಣಕ್ಕೆ ಲಿಕ್ವಿಡ್ ಹೀಲಿಯಂ ಫಿಲ್ಲಿಂಗ್ ಕಾಂಟ್ರಾಕ್ಟ್‌ಗಾಗಿ ಸಲ್ಲಿಸಿರುವ ಅಗ್ರಿಮೆಂಟ್ ಪ್ರಸ್ತಾವನೆಯ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:66(2022)**

ವಿಷಯ: NMR Instrumentation Centre ನ Jeol JNM ECZ 400MHz NMR Instrument ನ ವಾರ್ಷಿಕ ನಿರ್ವಹಣೆಯ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:67(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸ್ಥಾಪಿಸಿರುವ ವಿವಿಧ ಕೇಂದ್ರ / ಪೀಠಗಳ ಮತ್ತು ಅಧ್ಯಯನ ಕೇಂದ್ರಗಳ ಸಲಹಾ ಸಮಿತಿ ಸಭೆಯ ನಡವಳಿಗಳ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:68(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಪ್ರಸಾರಾಂಗದ ಸಲಹಾ ಸಮಿತಿ ಸಭೆಯ ನಡವಳಿಯ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:69(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕೇಂದ್ರ, ಜ್ಞಾನ ಕಾವೇರಿ, ಚಿಕ್ಕ ಅಳುವಾರ ಇಲ್ಲಿನ ಜೀವರಸಾಯನಶಾಸ್ತ್ರ ವಿಭಾಗದ ಪ್ರಯೋಗಾಲಯಕ್ಕೆ ಅಗತ್ಯವಿರುವ UV-Visible Double beam Spectrophotometer ಉಪಕರಣ ಖರೀದಿ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:70(2022)**

ವಿಷಯ: ಕಾಲೇಜು ಅಭಿವೃದ್ಧಿ ಸಮಿತಿಯ ರೂಪುರೇಷೆ, ಕಾರ್ಯವ್ಯಾಪ್ತಿ ರೂಪಿಸಲು ರಚಿಸಲಾದ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನದ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಂಡಿಕೇಟು: ಸಾ.ಸ.7:71(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕೈಗಾರಿಕಾ ರಸಾಯನಶಾಸ್ತ್ರ ವಿಭಾಗಕ್ಕೆ ಅಧ್ಯಕ್ಷರ ನೇಮಕಾತಿ ಬಗ್ಗೆ.

ನಿರ್ಣಯ: ಪ್ರೊ. ಬಿ. ಕೆ. ಸರೋಜಿನಿ, ಪ್ರಾಧ್ಯಾಪಕರು, ಇವರನ್ನು ದಿನಾಂಕ 08.11.2022ರಿಂದ ಅನ್ವಯವಾಗುವಂತೆ ಮುಂದಿನ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ವಿಭಾಗದ ಅಧ್ಯಕ್ಷರನ್ನಾಗಿ ನೇಮಕಾತಿ ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:72(2022)**

ವಿಷಯ: ರಸಾಯನಶಾಸ್ತ್ರ ವಿಭಾಗಕ್ಕೆ ಪ್ರಯೋಗಾಲಯ ಉಪಕರಣಗಳನ್ನು ಖರೀದಿಸುವ ಪ್ರಸ್ತಾವನೆ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:73(2022)**

ವಿಷಯ: ಕೈಗಾರಿಕಾ ರಸಾಯನಶಾಸ್ತ್ರ ವಿಭಾಗಕ್ಕೆ ಬೇಕಾಗಿರುವ Rotary Evaporator with Vacuum pump ಉಪಕರಣಗಳ ಖರೀದಿ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:74(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 500 Mbps ಇಂಟರ್ನೆಟ್ ಲೀಸ್ಡ್ ಲೈನ್ ಸಂಪರ್ಕದ ಪ್ರಸ್ತಾವನೆ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:75(2022)**

ವಿಷಯ: UGC XII Plan ಯೋಜನೆಯಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗಕ್ಕೆ Bicycle Ergometer ಎಂಬ ಉಪಕರಣದ ಖರೀದಿ ಪ್ರಸ್ತಾವನೆ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:76(2022)**

ವಿಷಯ: UGC XII Plan ಯೋಜನೆಯಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗಕ್ಕೆ Motorised Treadmill ಎಂಬ ಉಪಕರಣದ ಖರೀದಿ ಪ್ರಸ್ತಾವನೆ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:77(2022)**

ವಿಷಯ: DSTY PURSE ಲ್ಯಾಬ್ - Rigaku Saturn 724 HG Single Crystal XRD ಉಪಕರಣದ ವಾರ್ಷಿಕ ನಿರ್ವಹಣೆ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:78(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಮತ್ತು BReT Solutifons Pvt. Ltd., Bangalore ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:79(2022)**

ವಿಷಯ: DST PURSE ಲ್ಯಾಬ್ - Carl Zeiss FESEM ಉಪಕರಣದ ವಾರ್ಷಿಕ ನಿರ್ವಹಣೆಯ ಕರಾರಿನ ಇಂಡೆಂಟಿಗೆ ಮಂಜೂರಾತಿ ನೀಡುವ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:80(2022)**

ವಿಷಯ: ಕೈಗಾರಿಕಾ ರಸಾಯನಶಾಸ್ತ್ರ ವಿಭಾಗಕ್ಕೆ ಬೇಕಾದ ಉಪಕರಣಗಳ ಖರೀದಿ ಪ್ರಸ್ತಾವನೆ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:81(2022)**

ವಿಷಯ: ವೈದ್ಯಕೀಯ ಭೌತಶಾಸ್ತ್ರ ಕೋರ್ಸುಗೆ ಅತೀ ತುರ್ತಾಗಿ ಬೇಕಾಗಿರುವ ಉಪಕರಣಗಳ ಖರೀದಿ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:82(2022)**

ವಿಷಯ: DST PURSE ಲ್ಯಾಬ್ -TGA Instrument Dual Beam Thermocouple Kit (SDT Q 600)ನ್ನು ಬದಲಾಯಿಸುವ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:83(2022)**

ವಿಷಯ: SERB ಪ್ರಾಜೆಕ್ಟ್, ಆನ್ವಯಿಕ ಪ್ರಾಣಿಶಾಸ್ತ್ರ ವಿಭಾಗ - Nanodrop One Microvolume UV-Vis Spectrophotometer ಉಪಕರಣ ಖರೀದಿ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:84(2022)**

ವಿಷಯ: DST PURSE ಲ್ಯಾಬ್ -Liquid Nitrogen Plant ನ Consumable Spare Parts (ಬಿಡಿಭಾಗಗಳನ್ನು) ಬದಲಾಯಿಸುವ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.7:85(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಪ್ರಸಾರಾಂಗದ ಮೂಲಕ ಪದವಿ ಕೋರ್ಸುಗಳ (ಎರಡನೇ ಚಾತುರ್ಮಾಸ) ಪಠ್ಯ ಪುಸ್ತಕಗಳನ್ನು ಮುದ್ರಣಗೊಳಿಸುವ ಪ್ರಸ್ತಾವನೆ ಬಗ್ಗೆ.

ನಿರ್ಣಯ: ದಿನಾಂಕ 29.10.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಇತರ ವಿಷಯಗಳು**

1. ರಾಷ್ಟ್ರೀಯ ಶಿಕ್ಷಣ ನೀತಿ 2020 ರನ್ವಯ ಪದವಿ ಮಟ್ಟದ ಕಾರ್ಯಕ್ರಮಗಳ ಪಠ್ಯಕ್ರಮದಲ್ಲಿ SEC ಕೋರ್ಸುಗಳಡಿ ಅಳವಡಿಸಲಾಗಿರುವ Financial Education ನ್ನು ಬೋಧಿಸುವ ಉಪನ್ಯಾಸಕರ ಬೋಧನಾರ್ಹತೆಯನ್ನು ನಿಗದಿಪಡಿಸಲು ವಾಣಿಜ್ಯ, ವ್ಯವಹಾರ ಆಡಳಿತ ಮತ್ತು ಅರ್ಥಶಾಸ್ತ್ರ ವಿಷಯತಜ್ಞರುಳ್ಳ Interdisciplinary ಅಧ್ಯಯನ ಮಂಡಳಿಗೆ ಈ ಬಗ್ಗೆ ಕಾರ್ಯಸೂಚಿ ಮಂಡಿಸಿ, ಕ್ರಮ ಕೈಗೊಳ್ಳಬೇಕೆಂದು ಸಿಂಡಿಕೇಟು ನಿರ್ಣಯಿಸಿತು. ಈಗಾಗಲೇ ಕುಲಸಚಿವರ ಕಛೇರಿಯಿಂದ ಈ ಬಗ್ಗೆ ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: MU/ACC/CR16/2022-23/A8 Dtd.31.10.2022 ಯನ್ನು ಹಿಂಪಡೆಯಬೇಕೆಂಬುದಾಗಿಯೂ ನಿರ್ಣಯಿಸಲಾಯಿತು.
2. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ Double Entry System ಬಗ್ಗೆ ಪ್ರಗತಿಯ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಅಂತಿಮವಾಗಿ, ದಿನಾಂಕ 15.11.2022ರೊಳಗಾಗಿ ಸದರಿ ಪ್ರಕ್ರಿಯೆಯನ್ನು ಅಂತಿಮಗೊಳಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
3. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕ ಪದವಿ ಕಾರ್ಯಕ್ರಮಗಳ ಅಂತಿಮ ಸೆಮೆಸ್ಟರ್‌ನ ಪರೀಕ್ಷೆಗಳಲ್ಲಿ ಅನುತ್ತೀರ್ಣರಾದ ಮತ್ತು ಅಂತಿಮ ಸೆಮೆಸ್ಟರ್ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿದ್ದು, ಹಿಂಬಾಕಿ ಉಳಿಸಿಕೊಂಡಿರುವ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಅವಕಾಶವನ್ನು ಕಲ್ಪಿಸುವ ದೃಷ್ಟಿಯಿಂದ ವಿಶೇಷ ಪರೀಕ್ಷೆಗಳನ್ನು ನಡೆಸಲು ಸೂಕ್ತ ವ್ಯವಸ್ಥೆ ಮಾಡುವಂತೆ ಸಿಂಡಿಕೇಟು ನಿರ್ಣಯಿಸಿತು.
4. ಮಂಗಳೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿನ ವಿದ್ಯಾರ್ಥಿಗಳ ಹಾಜರಾತಿ ಕೊರತೆ ವಿಷಯದ ಬಗ್ಗೆ, ಹಾಜರಾತಿ ಕೊರತೆಯನ್ನು ಸಂಬಂಧಪಟ್ಟ ವಿದ್ಯಾರ್ಥಿಗೆ ಪತ್ರ ಮುಖೇನ, ಅಧಿಕೃತವಾಗಿ 2 ತಿಂಗಳಿಗೊಮ್ಮೆ ವಿದ್ಯಾರ್ಥಿಗಳ ಗಮನಕ್ಕೆ ತರಬೇಕು ಎಂದು ಸಿಂಡಿಕೇಟು ನಿರ್ಣಯಿಸಿತು. ಈ ಬಗ್ಗೆ ತಕ್ಷಣ ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರು ಮತ್ತು ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಪತ್ರ ಮುಖೇನ ತಿಳಿಸಲು ನಿರ್ಣಯಿಸಲಾಯಿತು.

5. M.Sc. Psychology, M.Sc. Forensic Science and Criminology and M.Sc. Big Data Analytics ವಿಭಾಗಳನ್ನು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಮುಂದಿನ ಶೈಕ್ಷಣಿಕ ವರ್ಷದಿಂದ ಆರಂಭಿಸಲು ನಿರ್ಣಯಿಸಲಾಯಿತು.
6. ದಿನಾಂಕ 30.11.2022ರಂದು ಉಪಕುಲಸಚಿವರ ಹುದ್ದೆಯ ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ನಿರ್ಣಯಿಸಲಾಯಿತು.
7. ಎಲ್ಲಾ ಶಿಕ್ಷಕೇತರ ಉದ್ಯೋಗಿಗಳ ಮುಂಬಡ್ತಿಯನ್ನು ಜೇಷ್ಠತಾ ಪಟ್ಟಿಯ ಪ್ರಕಾರ ಡಿಸೆಂಬರ್ 15, 2022 ರೊಳಗಾಗಿ ಅಂತಿಮಗೊಳಿಸಬೇಕೆಂಬುದಾಗಿ ನಿರ್ಣಯಿಸಲಾಯಿತು.
8. ದಿನಾಂಕ 13.09.2021ರಂದು ನಡೆದ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿನ ತೃತೀಯ ವಿಶೇಷ ಸಭೆಯ ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ ವಿ.ಸ.3:4(2021)ರಲ್ಲಿ ಡಾ. ಕರುಣಾಕರ ಎನ್.ವಿ., ತಾತ್ಕಾಲಿಕ/ ಅತಿಥಿ ಉಪನ್ಯಾಸಕರು, ಕನ್ನಡ ವಿಭಾಗ, ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇವರ ಸೇವೆಯನ್ನು ಖಾಯಂಗೊಳಿಸುವ ಪ್ರಸ್ತಾವನೆಯನ್ನು ಅನುಮೋದಿಸಿದ್ದು, ಸದರಿಯವರ ಸೇವೆಯನ್ನು ಶೀಘ್ರದಲ್ಲಿ ಖಾಯಂಗೊಳಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
9. ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ Food Court ನ ಸ್ಥಿತಿಯನ್ನು ಉತ್ತಮಪಡಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ, ಸಂಬಂಧಿತ ಮಾಲೀಕರಿಗೆ ನೋಟೀಸು ನೀಡಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
10. ದಿನಾಂಕ 15.09.2022ರಂದು ನಡೆದ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿನ ಆರನೆಯ ಸಾಮಾನ್ಯ ಸಭೆಯ ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ ಸಾ.ಸ.6:18(2022)ರಲ್ಲಿ ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿಯ ಕ್ರೀಡಾ ಮೈದಾನವನ್ನು ಬಳಸಲು ಕರಾವಳಿ ಕ್ರಿಕೆಟ್ ಕ್ಲಿನಿಕ್ ಇವರೊಂದಿಗಿನ ಕರಾರು ಪತ್ರವನ್ನು ಮರು ಪರಿಶೀಲಿಸಲು ರಚಿಸಲಾದ ಸಮಿತಿಯು ಸಲ್ಲಿಸಿದ ವರದಿಯನ್ನು ಒಪ್ಪಿಕೊಳ್ಳಲಾಯಿತು. ಈ ಹಿಂದಿನ ಸಂಸ್ಥೆಯೊಂದಿಗಿನ ಒಡಂಬಡಿಕೆಯು 5 ವರ್ಷಗಳನ್ನು ಪೂರೈಸಿರುವುದರಿಂದ, ಮಂಗಳೂರು ವಿಶ್ವವಿದ್ಯಾನಿಲಯವು ಇನ್ನು ಮುಂದೆ Mangalore Sports Club ಸಂಸ್ಥೆಗೆ ಮುಂದಿನ 5 ವರ್ಷಗಳವರೆಗೆ ಕ್ರೀಡಾಂಗಣ ಒದಗಿಸಬಹುದೆಂಬುದಾಗಿ ನಿರ್ಧರಿಸಲಾಯಿತು. ಈ ಬಗ್ಗೆ ತಕ್ಷಣ ಸೂಕ್ತ ಒಡಂಬಡಿಕೆಯನ್ನು ಮಾಡಲು ನಿರ್ಣಯಿಸಲಾಯಿತು.

ಮಾನ್ಯ ಕುಲಪತಿಗಳು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಿ/- ಸಹಿ/-

ಕುಲಸಚಿವರು ಕುಲಪತಿಗಳು.